# ತುಮಕೂರು ವಿಶ್ವವಿದ್ಯಾನಿಲಯ

ಪರೀಕ್ಷಾ ಭವನ, ಬಿ.ಹೆಚ್.ರಸ್ತೆ, ತುಮಕೂರು-572 103 ☏:0816 - 2255650,2273511 ಫ್ಯಾಕ್ಸ್ :0816-2270719


ಸಂಖ್ಯೆ:ತುವಿ:ಪ.ವಿ. :2022-23: ದಿನಾಂಕ: 03.08.2022

## ಸುತ್ತೋಲೆ

ವಿಷಯ: ಸೆಪ್ಟಂಬರ್-2020 ಮತ್ತು ಸೆಪ್ಟಂಬರ್/ಅಕ್ಟೋಬರ್ - 2021 ರ ಮಾಹೆಗಳಲ್ಲಿ ಕೋವಿಡ್-19 ರ ಕಾರಣದಿಂದಾಗಿ ಪರೀಕ್ಷೆ ಇಲ್ಲದೆ ಉನ್ನತೀಕರಣಗೊಳಿಸುವ ಸೌಲಭ್ಯವನ್ನು ಸ್ಥಗಿತಗೊಳಿಸಿರುವ ಬಗೆಗೆ.

ಉಲ್ಲೇಖ: ಮಾನ್ಯ ಕುಲಪತಿಯವರ ಅನುಮೋದನೆಯ ದಿನಾಂಕ: 18.05.2022 ಮತ್ತು 02.08.2022

* * * * * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಸೆಪ್ಟೆಂಬರ್-2020 ಮತ್ತು ಸೆಪ್ಟೆಂಬರ್/ಅಕ್ಟೋಬರ್-2021 ರ ಮಾಹೆಗಳಲ್ಲಿನ II & IV ನೇ ಸೆಮಿಸ್ಟರ್‌ಗಳಲ್ಲಿ ವ್ಯಾಸಂಗ ಮಾಡಿದ ವಿದ್ಯಾರ್ಥಿಗಳಿಗೆ ಯು.ಜಿ.ಸಿ. ಹಾಗೂ ರಾಜ್ಯ ಸರ್ಕಾರದ ಕೋವಿಡ್-19 ಮಾರ್ಗಸೂಚಿಯನುಸಾರ ವಿಶ್ವವಿದ್ಯಾನಿಲಯದ ಎಲ್ಲಾ ವಿವಿಧ ಸ್ನಾತಕ/ಸ್ನಾತಕ ಶಿಕ್ಷಣ ಪದವಿಗಳ ಎರಡು ಮತ್ತು ನಾಲ್ಕನೇ ಸೆಮಿಸ್ಟರ್ ಪರೀಕ್ಷೆಗಳಿಗೆ ಸಂಬಂಧಿಸಿದಂತೆ ***ಪರೀಕ್ಷಾ ಶುಲ್ಕವನ್ನು ಪಾವತಿಸಿದಂತಹ ಅರ್ಹ ವಿದ್ಯಾರ್ಥಿಗಳ*** ಪರೀಕ್ಷಾ ಫಲಿತಾಂಶಗಳನ್ನು ಕ್ರಮವಾಗಿ ಅವರ ಪ್ರಥಮ ಹಾಗೂ ತೃತೀಯ ಸೆಮಿಸ್ಟರ್ ಪರೀಕ್ಷಾ ಫಲಿತಾಂಶಗಳ ಆಧಾರದ ಮೇಲೆ ತೇರ್ಗಡೆಗೊಳಿಸಲಾಗಿದೆ. ಅಂದರೆ ವಿದ್ಯಾರ್ಥಿ ಪ್ರಥಮ ಸೆಮಿಸ್ಟರ್‌ನಲ್ಲಿ ಉತ್ತೀರ್ಣನಾಗಿದ್ದರೆ ಎರಡನೇ ಸೆಮಿಸ್ಟರ್ ಕೂಡ ನಿಯಮಾನುಸಾರ ಅಂಕಗಳ ಲೆಕ್ಕಚಾರ ಮಾಡಿ ಉತ್ತೀರ್ಣಗೊಳಿಸಲಾಗಿದೆ. ಇದೇ ಮಾದರಿಯಲ್ಲಿ ಮೂರನೇ ಸೆಮಿಸ್ಟರ್‌ನಿಂದ ನಾಲ್ಕನೇ ಸೆಮಿಸ್ಟರ್‌ಗೂ ಅನ್ವಯಿಸಲಾಗಿದೆ. ಪ್ರಥಮ ಮತ್ತು ತೃತೀಯ ಸೆಮಿಸ್ಟರ್‌ನಲ್ಲಿ ಅನುತ್ತೀರ್ಣರಾದ ವಿದ್ಯಾರ್ಥಿಗಳ ಎರಡನೇ ಮತ್ತು ನಾಲ್ಕನೇ ಸೆಮಿಸ್ಟರ್‌ಗಳ ಫಲಿತಾಂಶಗಳನ್ನು ಪ್ರಕಟಿಸದೆ ವಿದ್ಯಾರ್ಥಿಯು ಪ್ರಥಮ ಮತ್ತು ತೃತೀಯ ಸೆಮಿಸ್ಟರ್‌ಗಳಲ್ಲಿ ಉತ್ತೀರ್ಣರಾಗುತ್ತಾರೋ ಆಗ ಸದರಿ ವಿದ್ಯಾರ್ಥಿಯು ಎರಡನೇ ಹಾಗೂ ನಾಲ್ಕನೇ ಸೆಮಿಸ್ಟರ್‌ಗಳಲ್ಲಿ ಉತ್ತೀರ್ಣ ಎಂದು ನಿಯಮಾನುಸಾರ ಅಂಕ ನಿಗಧಿಪಡಿಸಿ ಫಲಿತಾಂಶ ಪ್ರಕಟಿಸಲಾಗಿದೆ. ಈ ಮೇಲಿನ ಪ್ರಕ್ರಿಯೆಗಳಂತೆ ಈಗಾಗಲೇ ಎರಡು ಬಾರಿ (ಸೆಪ್ಟೆಂಬರ್-2020 ಮತ್ತು ಸೆಪ್ಟೆಂಬರ್/ಅಕ್ಟೋಬರ್-2021 ರ ಮಾಹೆಗಳಲ್ಲಿ) ಕ್ರಮವಹಿಸಲಾಗಿದೆ. ಸ್ನಾತಕೋತ್ತರ ಪದವಿಗಳ ದ್ವಿತೀಯ ಸೆಮಿಸ್ಟರ್ ಪರೀಕ್ಷೆಗಳಿಗೂ ಈ ಮೇಲಿನಂತೆ ಕ್ರಮವಹಿಸಲಾಗಿದೆ. ಪ್ರಮುಖವಾಗಿ ಕೋವಿಡ್-19 ಅಥವಾ ಇತರೆ ಯಾವುದೇ ಕಾರಣಗಳಿಂದ ಪರೀಕ್ಷಾ ಶುಲ್ಕವನ್ನು ಪಾವತಿಸಲು ಸಾಧ್ಯವಾಗದಿರುವ ಎಲ್ಲಾ ಅರ್ಹ ವಿದ್ಯಾರ್ಥಿಗಳಿಗೆ ದಿನಾಂಕ: 15.02.2021 ರಿಂದ 03.03.2021 ರವರೆಗೆ ವಿಶೇಷ ಪರೀಕ್ಷೆಯನ್ನು ಸಹ ನಡೆಸಲಾಗಿದೆ.

ಹೀಗೆ ಕೋವಿಡ್-19 ಕಾರಣದಿಂದ ವಿವಿಧ ಸ್ನಾತಕ ಪದವಿಗಳ 2ನೇ ಮತ್ತು 4ನೇ ಸೆಮಿಸ್ಟರ್ ಹಾಗೂ ಸ್ನಾತಕ ಶಿಕ್ಷಣ ಮತ್ತು ಸ್ನಾತಕೋತ್ತರ ಪದವಿಗಳ 2ನೇ ಸೆಮಿಸ್ಟರ್ ವಿದ್ಯಾರ್ಥಿಗಳಿಗೆ ಈಗಾಗಲೇ ಎರಡು ಬಾರಿ ಪರೀಕ್ಷಾ ಶುಲ್ಕ ಪಾವತಿ ಹಾಗೂ ಪರೀಕ್ಷೆ ಬರೆಯುವುದರಿಂದ ವಿನಾಯಿತಿ ನೀಡಿ, ಹಿಂದಿನ ಸೆಮಿಸ್ಟರ್‌ಗಳಲ್ಲಿ ಉತ್ತೀರ್ಣರಾಗಿದ್ದರೆ ಸದರಿ ಸೆಮಿಸ್ಟರ್‌ನ್ನು ಉನ್ನತೀಕರಿಣಗೊಳಿಸಲಾಗಿದೆ. ಆದುದರಿಂದ ಅನುತ್ತೀರ್ಣಗೊಂಡಿರುವ / ಪರೀಕ್ಷೆ ಬರೆಯಲಾಗದ ವಿದ್ಯಾರ್ಥಿಗಳು ವಿಶ್ವವಿದ್ಯಾನಿಲಯದ ಪೂರ್ವಾನುಮತಿಯಿಲ್ಲದೆ ಅರ್ಜಿ ಸಲ್ಲಿಸುವ / ಪರೀಕ್ಷಾ ಶುಲ್ಕವನ್ನು ಪಾವತಿಸಲು ನಿಯಮಾವಳಿಗಳಲ್ಲಿ ಅವಕಾಶವಿರುವುದಿಲ್ಲ. ಕಾಲೇಜುಗಳ ಪ್ರಾಂಶುಪಾಲರು ಸಹ ಈ ವಿದ್ಯಾರ್ಥಿಗಳ ಅರ್ಜಿಗಳನ್ನು ಪರೀಕ್ಷಾಂಗ ವಿಭಾಗಕ್ಕೆ ರವಾನಿಸದಂತೆ ಈ ಮೂಲಕ ಸೂಚಿಸಲಾಗಿದೆ. ಹಿಂದಿನ ಸೆಮಿಸ್ಟರ್‌ಗಳಲ್ಲಿ (Odd Semesters) ಗಳಲ್ಲಿ ಇನ್ನೂ ಉತ್ತೀರ್ಣರಾಗದ ಅಥವಾ ನಿಗದಿತ ದಿನಾಂಕದೊಳಗೆ ಪರೀಕ್ಷಾ ಶುಲ್ಕವನ್ನು ಪಾವತಿಸದ ವಿದ್ಯಾರ್ಥಿಗಳಿಗೆ 2022-23 ನೇ ಶೈಕ್ಷಣಿಕ ಸಾಲಿನಿಂದ ಮೇಲ್ಕಂಡ ವಿನಾಯಿತಿಗಳು ಅನ್ವಯವಾಗುವುದಿಲ್ಲವೆಂಬ ಅಂಶವನ್ನು ಈ ಮೂಲಕ ಪ್ರಕಟಿಸಲಾಗುತ್ತಿದೆ.

ಕುಲಸಚಿವರು(ಪರೀಕ್ಷಾಂಗ)

ಕುಲಸಚಿವರು (ಮೌಲ್ಯಮಾಪನ)
ತುಮಕೂರು ವಿಶ್ವವಿದ್ಯಾನಿಲಯ
ತುಮಕೂರು

ಗೆ,

ಪ್ರಾಂಶುಪಾಲರುಗಳು, ಘಟಕ ಕಾಲೇಜುಗಳು / ಸಂಯೋಜಿತ ಸ್ನಾತಕ ಪದವಿ ಕಾಲೇಜುಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.

ಪ್ರತಿಗಳು:

1. ಮಾನ್ಯ ಕುಲಪತಿಯವರ ಆಪ್ತ ಕಾರ್ಯದರ್ಶಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
2. ಮಾನ್ಯ ಕುಲಸಚಿವರ ಆಪ್ತ ಸಹಾಯಕರು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
3. ಕಛೇರಿ ಪ್ರತಿ.

Scanned by CamScanner